Akashvani : Bangalore

National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

20.08.2024 19.35 hrs

ಮುಖ್ಯಾಂಶಗಳು

- ಪ್ರಧಾನಿ ನರೇಂದ್ರ ಮೋದಿ, ಮಲೇಷ್ಯಾ ಪ್ರಧಾನಿ ಅನ್ವರ್ ಇಬ್ರಾಹಿಂ ದ್ವಿಪಕ್ಷೀಯ ಮಾತುಕತೆ; ವಿವಿಧ ಕ್ಷೇತ್ರಗಳಲ್ಲಿ ಪರಸ್ಪರ ಸಹಕಾರಕ್ಕಾಗಿ ಒಪ್ಪಂದ
- ಕೋಲ್ಕತ್ತಾದಲ್ಲಿ ರಾಷ್ಟ್ರೀಯ ಭೂಕುಸಿತ ಮುನ್ಸೂಚನಾ ಕೇಂದ್ರ ಸ್ಥಾಪಿಸಲು ನಿರ್ಧಾರ - ರಾಷ್ಟ್ರಪತಿ ದ್ರೌಪದಿ ಮುರ್ಮು
- ದೇಶಾದ್ಯಂತ ವೈದ್ಯರ ಸುರಕ್ಷತೆ ಖಚಿತಪಡಿಸಿಕೊಳ್ಳಲು ರಾಷ್ಟ್ರೀಯ ಕಾರ್ಯಪಡೆ ರಚಿಸಿದ ಸುಪ್ರೀಂ ಕೋರ್ಟ್
- ಲ್ಯಾಟರಲ್ ಪ್ರವೇಶಕ್ಕೆ ಸಂಬಂಧಿಸಿದ ಜಾಹೀರಾತು ರದ್ದುಗೊಳಿಸುವಂತೆ ಯುಪಿಎಸ್‌ಸಿಗೆ ಕೇಂದ್ರ ಸರ್ಕಾರ ಸೂಚನೆ

<><*<><>*><>

ಕಾರ್ಮಿಕ ಮತ್ತು ಉದ್ಯೋಗ, ಆಯುರ್ವೇದ ಮತ್ತು ಸಾಂಪ್ರದಾಯಿಕ ಔಷಧಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಪರಸ್ಪರ ಸಹಕಾರಕ್ಕಾಗಿ ಭಾರತ ಮತ್ತು ಮಲೇಷ್ಯಾ ನಡುವೆ ಹಲವು ಒಪ್ಪಂದಗಳಿಗೆ ಇಂದು ಸಹಿ ಹಾಕಲಾಯಿತು. ನವದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಮಲೇಷ್ಯಾ ಪ್ರಧಾನಿ ಡಾಟೋ ಸೆರಿ ಅನ್ವರ್ ಬಿನ್ ಇಬ್ರಾಹಿಂ ನಡುವೆ ನಡೆದ ನಿಯೋಗ ಮಟ್ಟದ ಮಾತುಕತೆಯ ನಂತರ ಡಿಜಿಟಲ್ ತಂತ್ರಜ್ಞಾನ, ಸಂಸ್ಕೃತಿ, ಪ್ರವಾಸೋದ್ಯಮ ಹಾಗೂ ಕ್ರೀಡಾ ಕ್ಷೇತ್ರಗಳಲ್ಲಿ ಸಹಕಾರ ಕುರಿತ ಒಪ್ಪಂದಗಳಿಗೆ ಸಹಿ ಹಾಕಲಾಗಿದೆ. ನಂತರ ನಡೆದ ಜಂಟಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಭಾರತ ಮತ್ತು ಮಲೇಷ್ಯಾ ತಮ್ಮ ವರ್ಧಿತ ಕಾರ್ಯತಂತ್ರದ ಪಾಲುದಾರಿಕೆಯನ್ನು ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಗೆ ಉನ್ನತೀಕರಿಸಲು ನಿರ್ಧರಿಸಿವೆ. ಉಭಯ ದೇಶಗಳ ನಡುವಿನ ಕಾರ್ಯತಂತ್ರದ ಪಾಲುದಾರಿಕೆಯು ೧೦ ವರ್ಷಗಳನ್ನು ಪೂರ್ಣಗೊಳಿಸಲಿದೆ ಎಂದು ಅವರು ಹೇಳಿದರು. ಫಿನ್‌ಟೆಕ್, ಸೆಮಿಕಂಡಕ್ಟರ್, ರಕ್ಷಣಾ ಉದ್ಯಮ, ಕೃತಕ ಬುದ್ಧಿಮತ್ತೆ ಮತ್ತು ಕ್ವಾಂಟಮ್‌ನಂತಹ ಹೊಸ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಸಹಕಾರವನ್ನು ಹೆಚ್ಚಿಸಲು ಒತ್ತು ನೀಡಲಾಗಿದೆ. ಭಾರತದ ಯುಪಿಐ ಮತ್ತು ಮಲೇಷಿಯನ್ ಪೇನೆಟ್ ಅನ್ನು ಜೋಡಿಸಲು ನಿರ್ಧರಿಸಲಾಗಿದೆ ಎಂದು ಅವರು ಹೇಳಿದರು. ಬಳಿಕ ಮಾತನಾಡಿದ ಮಲೇಷ್ಯಾದ ಪ್ರಧಾನಿ ಡಾಟೋ ಸೆರಿ ಅನ್ವರ್ ಬಿನ್ ಇಬ್ರಾಹಿಂ, ಭಾರತ ಶ್ರೇಷ್ಠ ಇತಿಹಾಸ, ಶ್ರೇಷ್ಠ ಸಂಸ್ಕೃತಿ ಮತ್ತು ಶ್ರೇಷ್ಠ ನಾಗರಿಕತೆಯನ್ನು ಹೊಂದಿರುವ ರಾಷ್ಟ್ರವಾಗಿದೆ. ಉಭಯ ರಾಷ್ಟ್ರಗಳು ಮತ್ತಷ್ಟು ಅನ್ವೇಷಿಸಬೇಕಾದ ಇನ್ನೂ ಹಲವು ಕ್ಷೇತ್ರಗಳಿವೆ ಎಂದು ಹೇಳಿದರು.

<><*<><>*><>

ದೇಶದ ಮುನ್ಸೂಚನಾ ವ್ಯವಸ್ಥೆಯನ್ನು ಹೆಚ್ಚು ನಿಖರಗೊಳಿಸುವ ಅಗತ್ಯವಿದ್ದು, ಇದರಿಂದ ವಿಪತ್ತುಗಳಿಂದ ಉಂಟಾಗುವ ಜೀವಹಾನಿಗಳನ್ನು ತಗ್ಗಿಸಬಹುದು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ನವದೆಹಲಿಯ ರಾಷ್ಟ್ರಪತಿ ಭವನದಲ್ಲಿಂದು ರಾಷ್ಟ್ರೀಯ ಭೂವಿಜ್ಞಾನ ಪ್ರಶಸ್ತಿಗಳನ್ನು ಪ್ರದಾನ ಮಾಡಿದ ನಂತರ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ದೇಶದ ವಿವಿಧ ಭಾಗಗಳಲ್ಲಿ ಭೂಕುಸಿತ ಮತ್ತು ಪ್ರವಾಹದಂತಹ ವಿಪತ್ತುಗಳಿಂದ ಜೀವ ಹಾನಿಯುಂಟಾಗಿದೆ. ಭೂಕುಸಿತ ಪೀಡಿತ ರಾಜ್ಯಗಳಿಗೆ ಮುನ್ನೆಚ್ಚರಿಕಾ ಮಾಹಿತಿ ನೀಡಲು ಕೋಲ್ಕತ್ತಾದಲ್ಲಿ ರಾಷ್ಟ್ರೀಯ ಭೂಕುಸಿತ ಮುನ್ಸೂಚನಾ ಕೇಂದ್ರವನ್ನು ಸ್ಥಾಪಿಸಲಾಗುತ್ತಿದೆ ಎಂದು ತಿಳಿಸಿದರು. ೨೦೪೭ ರ ವೇಳೆಗೆ ಭಾರತವು ಅಭಿವೃದ್ಧಿ ಹೊಂದಿದ ರಾಷ್ಟ್ರವಾಗಲು ಖನಿಜ ಉತ್ಪಾದನೆಯಲ್ಲಿ ಸ್ವಾವಲಂಬಿಯಾಗುವುದು ಮುಖ್ಯವಾಗಿದೆ ಎಂದ ಅವರು, ದೇಶದಲ್ಲಿ ಕೈಗೊಳ್ಳಲಾಗುತ್ತಿರುವ ಸುಧಾರಣೆಗಳು ಮತ್ತು ಆವಿಷ್ಕಾರಗಳು ಕೇವಲ ಆರ್ಥಿಕ ಅಭಿವೃದ್ಧಿಗೆ ಉತ್ತೇಜನ ನೀಡುವುದಲ್ಲದೆ ಪರಿಸರ ಸಂರಕ್ಷಣೆಯತ್ತ ಗಮನಹರಿಸುತ್ತಿವೆ ಎಂದರು. ಕಾರ್ಯಕ್ರಮದಲ್ಲಿ

ರಾಷ್ಟ್ರಪತಿಗಳು ಹನ್ನೆರಡು ವಿಭಾಗಗಳಲ್ಲಿ ೨೧ ಭೂವಿಜ್ಞಾನಿಗಳಿಗೆ ರಾಷ್ಟ್ರೀಯ ಭೂವಿಜ್ಞಾನ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು.

<><*<><>*><>

ದೇಶಾದ್ಯಂತ ವೈದ್ಯರ ಸುರಕ್ಷತೆ ಖಚಿತಪಡಿಸಿಕೊಳ್ಳಲು ಸುಪ್ರೀಂ ಕೋರ್ಟ್ ರಾಷ್ಟ್ರೀಯ ಕಾರ್ಯಪಡೆ ರಚಿಸಿದೆ. ಕೋಲ್ಕತ್ತಾ ಆಸ್ಪತ್ರೆಯಲ್ಲಿ ಕರ್ತವ್ಯನಿರತ ವೈದ್ಯೆಯ ಮೇಲೆ ಲೈಂಗಿಕ ದೌರ್ಜನ್ಯ ಮತ್ತು ಕೊಲೆ ಪ್ರಕರಣದ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಡಿ.ವೈ. ಚಂದ್ರಚೂಡ್ ನೇತೃತ್ವದ ಪೀಠ, ಮೂರು ವಾರಗಳಲ್ಲಿ ತನ್ನ ಮಧ್ಯಂತರ ವರದಿಯನ್ನು ಮತ್ತು ಎರಡು ತಿಂಗಳೊಳಗೆ ಅಂತಿಮ ವರದಿ ಸಲ್ಲಿಸುವಂತೆ ಕಾರ್ಯಪಡೆಗೆ ಸೂಚಿಸಿದೆ. ಮಹಿಳೆಯರ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಲು ರಾಷ್ಟ್ರವ್ಯಾಪಿ ಅನುಸರಿಸಬೇಕಾದ ವಿಧಾನಗಳ ಕುರಿತು ಶಿಫಾರಸ್ಸು ಮಾಡಲು ನ್ಯಾಯಾಲಯ, ದೇಶಾದ್ಯಂತ ವೈದ್ಯರನ್ನು ಒಳಗೊಂಡ ರಾಷ್ಟ್ರೀಯ ಕಾರ್ಯಪಡೆ ರಚಿಸಿದೆ ಎಂದು ಮುಖ್ಯನ್ಯಾಯಮೂರ್ತಿಗಳು ತಿಳಿಸಿದ್ದಾರೆ. ಕಾರ್ಯಪಡೆಯು ಶಸ್ತ್ರಚಿಕಿತ್ಸಕ ವೈಸ್ ಅಡ್ಮಿರಲ್ ಆರ್.ಸರಿನ್, ಡಾ.ಡಿ.ನಾಗೇಶ್ವರ್ ರೆಡ್ಡಿ, ಡಾ.ಎಂ.ಶ್ರೀನಿವಾಸ್, ಡಾ.ಪ್ರತಿಮಾ ಮೂರ್ತಿ, ಡಾ.ಗೋವರ್ಧನ್ ದತ್ ಪುರಿ, ಡಾ.ಸೌಮಿತ್ರಾ ರಾವತ್, ದೆಹಲಿ ಏಮ್ಸ್‌ನ ಹೃದ್ರೋಗ ವಿಭಾಗದ ಮುಖ್ಯಸ್ಥೆ ಪ್ರೊಫೆಸರ್ ಅನಿತಾ ಸಕ್ಸೇನಾ, ಮುಂಬೈನ ಗ್ರಾಂಟ್ ಮೆಡಿಕಲ್ ಕಾಲೇಜು ಡೀನ್ ಪ್ರೊಫೆಸರ್ ಪಲ್ಲವಿ ಸಪ್ರೆ ಮತ್ತು ಏಮ್ಸ್ ನರಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ.ಪದ್ಮಾ ಶ್ರೀವಾಸ್ತವ ಅವರನ್ನು ಒಳಗೊಂಡಿದೆ.

<><*<><>*><>

ಆಸ್ಪತ್ರೆಗಳಲ್ಲಿ ಭದ್ರತೆಯನ್ನು ಹೆಚ್ಚಿಸಲು ಸರ್ಕಾರಿ ಆಸ್ಪತ್ರೆಗಳು ಮತ್ತು ಸಂಸ್ಥೆಗಳ ಎಲ್ಲಾ ಮುಖ್ಯಸ್ಥರಿಗೆ ಕೇಂದ್ರ ಆರೋಗ್ಯ ಸಚಿವಾಲಯವು ಪತ್ರ ಬರೆದಿದೆ. ಪ್ರವೇಶ ದ್ವಾರಗಳು, ನಿರ್ಗಮನಗಳು, ಕಾರಿಡಾರ್‌ಗಳು, ಡಾರ್ಕ್ ಸ್ಪಾಟ್‌ಗಳು ಮತ್ತು ಸೂಕ್ಷ್ಮ ಪ್ರದೇಶಗಳು ಸೇರಿದಂತೆ ಆಯಕಟ್ಟಿನ ಸ್ಥಳಗಳಲ್ಲಿ ಸಾಕಷ್ಟು ಸಂಖ್ಯೆಯ ಹೈ-ರೆಸಲ್ಯೂಶನ್ ಸಿಸಿಟಿವಿ ಕ್ಯಾಮೆರಾಗಳನ್ನು ಸ್ಥಾಪಿಸುವಂತೆ ಸಚಿವಾಲಯ ಸೂಚನೆ ನೀಡಿದೆ. ತುರ್ತು ಪರಿಸ್ಥಿತಿಗಳಿಗೆ ತ್ವರಿತ ಪ್ರತಿಕ್ರಿಯೆಗಾಗಿ ನಿಯಂತ್ರಣ ಕೊಠಡಿಯನ್ನು ಸಹ ಸ್ಥಾಪಿಸಬೇಕು. ಆಸ್ಪತ್ರೆ ಆವರಣದಲ್ಲಿ ಸರಿಯಾದ ನಿಗಾ, ಗಸ್ತು ಮತ್ತು ಕಣ್ಗಾವಲುಗಾಗಿ ಸಾಕಷ್ಟು ಸಂಖ್ಯೆಯ ಸುಶಿಕ್ಷಿತ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಬೇಕು. ಅಧಿಕೃತ ಸಿಬ್ಬಂದಿಗೆ ಮಾತ್ರ ಪ್ರವೇಶವನ್ನು ಅನುಮತಿಸಲು ಪ್ರವೇಶ ಮತ್ತು ನಿರ್ಗಮನವನ್ನು ಕಟ್ಟುನಿಟ್ಟಾಗಿ ಮೇಲ್ವಿಚಾರಣೆ ಮಾಡಬೇಕು ಮತ್ತು ಕರ್ತವ್ಯದಲ್ಲಿರುವಾಗ ಎಲ್ಲಾ ಆಸ್ಪತ್ರೆಯ ಸಿಬ್ಬಂದಿ ಐಡಿ ಕಾರ್ಡ್‌ಗಳನ್ನು ಪ್ರದರ್ಶಿಸುವುದನ್ನು ಕಡ್ಡಾಯಗೊಳಿಸಬೇಕು ಎಂದು ಸಚಿವಾಲಯ ಸ್ಪಷ್ಟಪಡಿಸಿದೆ. ಎಲ್ಲಾ ಸಂದರ್ಶಕರ ಮೇಲ್ವಿಚಾರಣೆಯನ್ನು ಖಚಿತಪಡಿಸಿಕೊಳ್ಳಲು ಸೂಕ್ತ ವ್ಯವಸ್ಥೆಗಳನ್ನು ಮಾಡಬೇಕು. ಆಸ್ಪತ್ರೆ ಆವರಣದಲ್ಲಿ ಆರೋಗ್ಯ ಕಾರ್ಯಕರ್ತರ ವಿರುದ್ಧ ಹಿಂಸಾಚಾರವನ್ನು ತಡೆಗಟ್ಟಲು ಕ್ರಮ ಕೈಗೊಳ್ಳಬೇಕು. ವೈದ್ಯರು, ದಾದಿಯರು ಮತ್ತು ಆಡಳಿತ ಸಿಬ್ಬಂದಿ ಸೇರಿದಂತೆ ಎಲ್ಲಾ ಆಸ್ಪತ್ರೆ ಸಿಬ್ಬಂದಿಗೆ ಭದ್ರತಾ ಬೆದರಿಕೆಗಳನ್ನು ಗುರುತಿಸಲು ಮತ್ತು ಪ್ರತಿಕ್ರಿಯಿಸಲು ತರಬೇತಿ ನೀಡಬೇಕು ಎಂಬುದು ಸೇರಿದಂತೆ ಹಲವು ಮಾರ್ಗಸೂಚಿಗಳನ್ನು ನೀಡಲಾಗಿದೆ.

<><*<><>*><>

ಲ್ಯಾಟರಲ್ ಪ್ರವೇಶಕ್ಕೆ ಸಂಬಂಧಿಸಿದ ಜಾಹೀರಾತನ್ನು ರದ್ದುಗೊಳಿಸುವಂತೆ ಸರ್ಕಾರವು ಕೇಂದ್ರ ಲೋಕಸೇವಾ ಆಯೋಗವನ್ನು ಕೇಳಿದೆ. ಇತ್ತೀಚೆಗಷ್ಟೇ ಕೇಂದ್ರ ಸಚಿವಾಲಯಗಳಲ್ಲಿ ೪೫ ಜಂಟಿ ಕಾರ್ಯದರ್ಶಿಗಳು, ನಿರ್ದೇಶಕರು ಮತ್ತು ಉಪ ಕಾರ್ಯದರ್ಶಿಗಳನ್ನು ನೇಮಿಸಲು ಯುಪಿಎಸ್‌ಸಿ ಜಾಹೀರಾತು ನೀಡಿತ್ತು. ಇದನ್ನು ವಿರೋಧ ಪಕ್ಷಗಳು ಪ್ರಶ್ನಿಸಿವೆ. ಕೇಂದ್ರ ಸಿಬ್ಬಂದಿ ಮತ್ತು ತರಬೇತಿ ಇಲಾಖೆಯ ಸಚಿವ ಡಾ. ಜಿತೇಂದ್ರ ಸಿಂಗ್ ಅವರು ಯುಪಿಎಸ್‌ಸಿ ಅಧ್ಯಕ್ಷೆ ಪ್ರೀತಿ ಸುದನ್ ಅವರಿಗೆ ಪತ್ರ ಬರೆದಿದ್ದು, ಲ್ಯಾಟರಲ್ ಪ್ರವೇಶ ಪ್ರಕ್ರಿಯೆಯು ಸಂವಿಧಾನದಲ್ಲಿ ಪ್ರತಿಪಾದಿಸಲಾದ ಸಾಮಾಜಿಕ ನ್ಯಾಯ ಒಳಗೊಂಡಿರಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ದೃಢವಾದ ನಂಬಿಕೆ ಹೊಂದಿದ್ದಾರೆ ಎಂದು ತಮ್ಮ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ವಿಶೇಷವಾಗಿ ಮೀಸಲಾತಿಯ ನಿಬಂಧನೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕ ಉದ್ಯೋಗದಲ್ಲಿ ಮೀಸಲಾತಿಯು ಸರ್ಕಾರದ ಸಾಮಾಜಿಕ ನ್ಯಾಯ ಚೌಕಟ್ಟಿನ ಮೂಲಾಧಾರವಾಗಿದೆ. ಅನ್ಯಾಯ ಸರಿಪಡಿಸುವ ಮತ್ತು ಒಳಗೊಳ್ಳುವಿಕೆಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ ಎಂದು ಸಚಿವರು ತಿಳಿಸಿದ್ದಾರೆ.

೨೦೦೫ರಲ್ಲಿ ವೀರಪ್ಪ ಮೊಯ್ಲಿ ನೇತೃತ್ವದ ಎರಡನೇ ಆಡಳಿತ ಸುಧಾರಣಾ ಆಯೋಗವು ಲ್ಯಾಟರಲ್ ಎಂಟ್ರಿಯನ್ನು ಅನುಮೋದಿಸಿದೆ. ೨೦೧೩ರಲ್ಲಿ ಆರನೇ ವೇತನ ಆಯೋಗದ ಶಿಫಾರಸುಗಳು ಕೂಡ ಇದೇ ರೀತಿಯಲ್ಲಿವೆ. ಹಿಂದಿನ ಸರ್ಕಾರಗಳ ಅವಧಿಯಲ್ಲಿ, ವಿವಿಧ ಸಚಿವಾಲಯಗಳಲ್ಲಿ ಕಾರ್ಯದರ್ಶಿ ಮತ್ತು ಯುಐಡಿಎಐ ನ ನಾಯಕತ್ವದಂತಹ ಪ್ರಮುಖ ಹುದ್ದೆಗಳನ್ನು ಯಾವುದೇ ಮೀಸಲಾತಿ ಪ್ರಕ್ರಿಯೆಯನ್ನು ಅನುಸರಿಸದೆ ಲ್ಯಾಟರಲ್ ಮೂಲಕ ಪ್ರವೇಶ ನೀಡಲಾಯಿತು ಎಂದು ಸಚಿವರು ತಮ್ಮ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಮೀಸಲಾತಿಯ ತತ್ವಗಳೊಂದಿಗೆ ಲ್ಯಾಟರಲ್ ಪ್ರವೇಶ ಪ್ರಕ್ರಿಯೆಯ ನಿರ್ಧಾರವು ಸಾಮಾಜಿಕ ನ್ಯಾಯದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರ ಬದ್ಧತೆಯನ್ನು ತೋರುತ್ತದೆ ಎಂದು ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಪ್ರಧಾನಮಂತ್ರಿ ಯಾವಾಗಲೂ ಸಾಮಾಜಿಕ ನ್ಯಾಯದಲ್ಲಿ ನಂಬಿಕೆ ಇಟ್ಟಿದ್ದಾರೆ ಮತ್ತು ಅವರ ಯೋಜನೆಗಳು ಸಮಾಜದ ದುರ್ಬಲ ವರ್ಗಗಳ ಕಲ್ಯಾಣವನ್ನು ಮುನ್ನಡೆಸುತ್ತಿದೆ ಎಂದು ಹೇಳಿದ್ದಾರೆ. ೨೦೦೫ರಲ್ಲಿ ಎರಡನೇ ಆಡಳಿತ ಸುಧಾರಣಾ ಆಯೋಗವು ಲ್ಯಾಟರಲ್ ಪ್ರವೇಶಕ್ಕೆ ಅನುಮೋದಿಸಿರುವುದನ್ನು ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯಿಲಿ ಒಪ್ಪಿಕೊಂಡಿದ್ದಾರೆ. ಐಎಎನ್‌ಎಸ್ ಸುದ್ದಿ ಸಂಸ್ಥೆಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಅವರು, ಪರಿಣಿತರನ್ನು ಉನ್ನತ ಸರ್ಕಾರಿ ಹುದ್ದೆಗಳಿಗೆ ನೇಮಕ ಮಾಡಲು ಸರಿಯಾದ ಚೌಕಟ್ಟು ರೂಪಿಸುವುದು ಇದರ ಉದ್ದೇಶವಾಗಿತ್ತು ಎಂದು ಹೇಳಿದರು. ಡಾ. ಮನಮೋಹನ್ ಸಿಂಗ್, ಮಾಂಟೆಕ್ ಸಿಂಗ್ ಅಹ್ಲುವಾಲಿಯಾ ಮುಂತಾದ ವ್ಯಕ್ತಿಗಳು ಲ್ಯಾಟರಲ್ ವ್ಯವಸ್ಥೆ ಮೂಲಕ ಬಂದವರು ಎಂದು ವೀರಪ್ಪ ಮೊಯಿಲಿ ಹೇಳಿದ್ದಾರೆ.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೩೭೮ ಅಂಕಗಳ ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೦ ಸಾವಿರದ ೮೦೩ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೧೨೬ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೬೯೯ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೩ ರೂಪಾಯಿ ೭೯ ಪೈಸೆಯಷ್ಟಾಗಿದೆ.

<><*<><>*><>

ಈಶಾನ್ಯ ಭಾರತದಲ್ಲಿ ಮುಂದಿನ ೨ ದಿನಗಳವರೆಗೆ ಭಾರೀ ಮಳೆಯಾಗಲಿದ್ದು, ಈ ಹಿನ್ನೆಲೆಯಲ್ಲಿ ಭಾರತೀಯ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಘೋಷಿಸಿದೆ. ಅಸ್ಸಾಂ, ಮೇಘಾಲಯ, ನಾಗಾಲ್ಯಾಂಡ್, ಮಣಿಪುರ, ಮಿಜೋರಾಮ್ ಮತ್ತು ತ್ರಿಪುರಾದಲ್ಲಿ ಧಾರಾಕಾರ ಮಳೆಯಾಗುವ ಸಂಭವ. ಮುಂದಿನ ಕೆಲವು ದಿನಗಳ ಕಾಲ ಪಶ್ಚಿಮ ಬಂಗಾಳ, ಬಿಹಾರ, ಜಾರ್ಖಂಡ್ ಮತ್ತು ಒಡಿಶಾದಲ್ಲಿ ತೀವ್ರ ಮಳೆಯಾಗಲಿದೆ. ಅಲ್ಲದೆ, ಮುಂದಿನ ಎರಡು ದಿನಗಳ ಕಾಲ ಕೇರಳ, ತಮಿಳುನಾಡು ಮತ್ತು ಲಕ್ಷದ್ವೀಪದಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇದೇ ವೇಳೆ ದೆಹಲಿಯ ಅನೇಕ ಭಾಗಗಳಲ್ಲಿಂದು ಭಾರೀ ಮಳೆಯಾಗಲಿದೆ. ತಗ್ಗು ಪ್ರದೇಶಗಳಿಗೆ ನೀರು ನುಗ್ಗಿದ್ದು, ಇದರಿಂದಾಗಿ ರಾಷ್ಟ್ರ ರಾಜಧಾನಿಯ ಹಲವು ಪ್ರದೇಶಗಳಲ್ಲಿ ಸಂಚಾರ ದಟ್ಟಣೆ ಉಂಟಾಗಿತ್ತು.

<><*<><>*><>

ಇದೇ ತಿಂಗಳ ೨೮ ರಿಂದ ಪ್ಯಾರಿಸ್ ಪ್ಯಾರಾಲಿಂಪಿಕ್ಸ್ ಆರಂಭವಾಗಲಿದ್ದು, ಬಿಲ್ಲುಗಾರಿಕೆ, ಅಥ್ಲೆಟಿಕ್ಸ್, ಬ್ಯಾಡ್ಮಿಂಟನ್, ಈಜು, ಟೇಬಲ್ ಟೆನಿಸ್ ಸೇರಿದಂತೆ ೧೨ ಕ್ರೀಡೆಗಳಲ್ಲಿ ೮೪ ಕ್ರೀಡಾಪಟುಗಳು ಸ್ಪರ್ಧಿಸಲಿದ್ದಾರೆ. ಸೈಕ್ಲಿಂಗ್, ರೋಯಿಂಗ್ ಮತ್ತು ಜೂಡೋ ಹೊಸ ಕ್ರೀಡೆಗಳಲ್ಲಿಯೂ ಭಾರತೀಯರು ಸ್ಪರ್ಧಿಸುತ್ತಿದ್ದಾರೆ. ಟೋಕಿಯೋ ಪ್ಯಾರಾಲಿಂಪಿಕ್ಸ್‌ನಲ್ಲಿ ೧೯ ಪದಕಗಳನ್ನು ಮತ್ತು ೨೦೨೨ರ ಏಷ್ಯನ್ ಪ್ಯಾರಾ ಗೇಮ್ಸ್‌ನಲ್ಲಿ ೧೧೧ ಪದಕಗಳನ್ನು ಭಾರತೀಯ ಕ್ರೀಡಾಪಟುಗಳು ಗೆದ್ದುಕೊಂಡಿದ್ದರು. ಪ್ಯಾರಿಸ್ ಪ್ಯಾರಾಲಿಂಪಿಕ್ಸ್‌ಗಾಗಿ ತೆರಳುತ್ತಿರುವ ಕ್ರೀಡಾಪಟುಗಳೊಂದಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಸಂವಾದ ನಡೆಸಿದರು. ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ನಡೆದ ಸಂವಾದದಲ್ಲಿ ಪ್ರಧಾನಿ, ಕ್ರೀಡಾಪಟುಗಳು ಭಾರತದ ಧ್ವಜಧಾರಿಗಳಾಗಿ ಪ್ಯಾರಿಸ್‌ಗೆ ತೆರಳುತ್ತಿದ್ದಾರೆ. ಈ ಪ್ರಯಾಣವು ಅವರ ಜೀವನ ಮತ್ತು ವೃತ್ತಿಜೀವನದ ಅತ್ಯಂತ ಮಹತ್ವದ ಪ್ರಯಾಣವಾಗಲಿದೆ ಎಂದು ಅವರು ಹೇಳಿದರು.

ಕ್ರೀಡಾ ಸಚಿವ ಮನ್ಸುಖ್ ಮಾಂಡವಿಯಾ ಮಾತನಾಡಿ, ಈ ಬಾರಿ ಪ್ಯಾರಾಲಿಂಪಿಕ್ಸ್‌ನಲ್ಲಿ ಭಾಗವಹಿಸಲು ಭಾರತ ತನ್ನ ಅತಿದೊಡ್ಡ ತಂಡವನ್ನು ಕಳುಹಿಸುತ್ತಿದೆ. ಪ್ಯಾರಿಸ್ ಪ್ಯಾರಾಲಿಂಪಿಕ್ಸ್ ೨೦೨೪ರಲ್ಲಿ ೮೪ ಭಾರತೀಯ ಅಥ್ಲೀಟ್‌ಗಳು ಭಾರತವನ್ನು ಪ್ರತಿನಿಧಿಸಲಿದ್ದಾರೆ. ಈ ಬಾರಿಯೂ ಪ್ಯಾರಿಸ್ ಪ್ಯಾರಾಲಿಂಪಿಕ್ಸ್‌ನಲ್ಲಿ ದೇಶಕ್ಕೆ ಕೀರ್ತಿ ತರಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**